**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

## O.S. No. 151/2024

**ಸಾಕ್ಷಿಯನ್ನು ದಿನಾಂಕಃ 15.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎಸ್.ಕೆ.ಜಿ. ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿ ಪರ ಸಾಕ್ಷಿ ಆಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಸಾಕ್ಷಿಗೆ ನಿ.ಪಿ.-1 ಅನ್ನು ತೋರಿಸಲಾಗಿ ಸಾಕ್ಷಿ ಅದು ವಾದಿ ಹಾಗು ಪ್ರತಿವಾದಿಗಳ ನಡುವೆ ಆದ ಕ್ರಯದ ಒಪ್ಪಂದದ ಕರಾರು ಪತ್ರ ಎಂದು ಗುರುತಿಸಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿ ಗುರುತಿಸಿದ ಮೇರೆಗೆ ನಿ.ಪಿ.-1 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.-1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿ.ಪಿ.-18 ಅನ್ನು ತೋರಿಸಲಾಗಿ ಸಾಕ್ಷಿ ಅದು ಪ್ರತಿವಾದಿಗಳು ವಾದಿಗೆ ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರ ಎಂದು ಗುರುತಿಸಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿ ಗುರುತಿಸಿದ ಮೇರೆಗೆ ನಿ.ಪಿ.-18 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.-18(ಬಿ)** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಪ್ರತಿವಾದಿಗಳು ಏಕಪಕ್ಷೀಯವಾದ್ದರಿಂದ ಪಾಟೀ ಸವಾಲು ಇರುವುದಿಲ್ಲ ಎಂದು ಪರಿಗಣಿಸಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**